# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ದರಗಳನ್ನು ಕೇಂದ್ರ ಸರ್ಕಾರದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ದರಗಳಿಗೆ ಹೆಚ್ಚಿಸುವ ಬಗ್ಗೆ

ಓದಲಾಗಿದೆ:-
1 ಸರ್ಕಾರದ ಆದೇಶ ಸಂಖ್ಯೆ: ಸಕಇ 160 ಬಿಎಂಎಸ್ 2012 ದಿನಾಂಕ:29.06.2012
2 ಭಾರತ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ವೇತನ ಕಾರ್ಯಕ್ರಮದ ಮಾರ್ಗಸೂಚಿ.
3 14-15ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 199
4 ಸರ್ಕಾರದ ಆದೇಶ ಸಂಖ್ಯೆ:ಹಿಂವಇ 397 ಬಿಎಂಎಸ್ 2013, ಬೆಂಗಳೂರು ದಿನಾಂಕ:05.09.2013
5 ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯ ಸಂಖ್ಯೆ ಹಿಂವಕಇ/ವಿವೇ/ ಸಿಆರ್-33/ 2014-15 ದಿನಾಂಕ:07.08.2014

********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆದೇಶದಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ, ವಿದ್ಯಾರ್ಥಿ ವೇತನದ ದರಗಳನ್ನು 5 ರಿಂದ 7ನೇ ತರಗತಿಯವರೆಗೆ ರೂ.250/- ಹಾಗೂ 8 ರಿಂದ 10ನೇ ತರಗತಿಯ ಬಾಲಕರಿಗೆ ರೂ.500/- ಮತ್ತು ಬಾಲಕಿಯರಿಗೆ ರೂ.600/- ವಾರ್ಷಿಕವಾಗಿ ಹೆಚ್ಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಭಾರತ ಸರ್ಕಾರವು ಒಂದನೇ ತರಗತಿಯಿಂದ 10ನೇ ತರಗತಿಯವರೆವಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ದರಗಳನ್ನು ಈ ಕೆಳಕಂಡಂತೆ ನಿಗದಿಪಡಿಸಿದ್ದು, ಇದಕ್ಕಾಗಿ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ.44,500/- ಎಂದು ನಿಗದಿಪಡಿಸಿರುತ್ತದೆ.

(ದರ ರೂ.ಗಳಲ್ಲಿ ವಾರ್ಷಿಕವಾಗಿ)

| ತರಗತಿ | ಬಾಲಕ/ಬಾಲಕಿಯರು | Adhoc Grant | ಒಟ್ಟು |
|---|---|---|---|
| 1 ರಿಂದ 5 | 250/- | 500/- | 750/- |
| 6 ರಿಂದ 8 | 400/- | 500/- | 900/- |
| 9 ರಿಂದ 10 | 500/- | 500/- | 1,000/- |

ಮೇಲೆ ಓದಲಾದ ಕ್ರಮ ಸಂಖ್ಯೆ 3ರ 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ

> "ರಾಜ್ಯ ಸರ್ಕಾರದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ದರಗಳನ್ನು ಭಾರತ ಸರ್ಕಾರದ ದರಗಳಿಗೆ ಸಮಾನಾಂತರವಾಗಿ ಹೆಚ್ಚಿಸಲಾಗುವುದು." ಎಂದು ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ದರಗಳನ್ನು ಭಾರತ ಸರ್ಕಾರದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ದರಗಳಿಗೆ ಸಮಾನಾಂತರವಾಗಿ ಹೆಚ್ಚಿಸುವಂತೆ ಕೋರಿ, ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಓದಲಾದ ಕ್ರಮ ಸಂಖ್ಯೆ(5)ರಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 620 ಬಿಎಂಎಸ್ 2014 ಬೆಂಗಳೂರು.
ದಿನಾಂಕ:07.01.2015

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯದ, ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಾರ್ಷಿಕ ವಿದ್ಯಾರ್ಥಿ ವೇತನ ದರಗಳನ್ನು ಕೆಳಕಂಡ ಮಂಜೂರಾತಿ ವಿಧಾನವನ್ನು ಅನುಸರಿಸಿ ಭಾರತ ಸರ್ಕಾರದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ದರಗಳಿಗೆ ಸಮಾನಾಂತರವಾಗಿ ಈ ಕೆಳಗಿನಂತೆ ಹೆಚ್ಚಿಸಿ ಆದೇಶಿಸಲಾಗಿದೆ.

(ದರ ರೂ.ಗಳಲ್ಲಿ ವಾರ್ಷಿಕವಾಗಿ)

| ತರಗತಿ | ಬಾಲಕ/ಬಾಲಕಿಯರು | Adhoc Grant | ಒಟ್ಟು |
|---|---|---|---|
| 1 ರಿಂದ 5 | 250/- | 500/- | 750/- |
| 6 ರಿಂದ 8 | 400/- | 500/- | 900/- |
| 9 ರಿಂದ 10 | 500/- | 500/- | 1,000/- |

(1) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಆನ್‌ಲೈನ್ ಮೂಲಕ ವಿದ್ಯಾರ್ಥಿಗಳು/ಶಾಲೆಗಳಿಂದ ಅರ್ಜಿಗಳನ್ನು ಸ್ವೀಕರಿಸಿ, ಆನ್‌ಲೈನ್ ಮೂಲಕವೇ ವಿದ್ಯಾರ್ಥಿಗಳ / ಶಾಲೆಗಳ ಬ್ಯಾಂಕ್ ಖಾತೆಗೆ ಮಂಜೂರು ಮಾಡುವುದು.

(2) ಆಯಾ ತಾಲ್ಲೂಕಿಗೆ ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನದ ಮಿತಿಯೊಳಗೆ ಈ ಕೆಳಗಿನ ಆದ್ಯತೆಗಳಲ್ಲಿ ಮಂಜೂರಾತಿ ಮಾಡಲು ಕ್ರಮ ವಹಿಸುವುದು.

(ಅ) ಮೊದಲನೇ ಆದ್ಯತೆ: ಎಲ್ಲಾ ಅರ್ಹ ನವೀಕರಣ ವಿದ್ಯಾರ್ಥಿಗಳಿಗೆ ಮಂಜೂರು ಮಾಡುವುದು.

(ಆ) ಎರಡನೇ ಆದ್ಯತೆ: ಹಿಂದುಳಿದ ವರ್ಗಗಳ ಪ್ರವರ್ಗ-1ರ ಅರ್ಹವಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮಂಜೂರು ಮಾಡುವುದು.

(ಇ) ಮೂರನೇ ಆದ್ಯತೆ: ಉಳಿದ ಮೊತ್ತವನ್ನು ಅರ್ಹವಿರುವ ಪ್ರವರ್ಗ-2ಎ, ಪ್ರವರ್ಗ-3ಎ, ಪ್ರವರ್ಗ-3ಬಿ ಮತ್ತು ಇತರೆ ಹಿಂದುಳಿದ ವರ್ಗ (ಕೇಂದ್ರ ಸರ್ಕಾರದ ಹಿಂದುಳಿದ ವರ್ಗದ ಪಟ್ಟಿಯಲ್ಲಿ ಇರುವ ಜಾತಿಗಳು ಮಾತ್ರ) ಈ ಕೆಳಕಂಡ ಮೀಸಲಾತಿ ಪ್ರಮಾಣದಂತೆ ಆದಾಯದ ಆಧಾರದ ಮೇಲೆ (ಅತೀ ಕಡಿಮೆ ಆದಾಯದಿಂದ ಅನುಕ್ರಮವಾಗಿ) ಮಂಜೂರು ಮಾಡುವುದು.

| | |
|---|---|
| ಪ್ರವರ್ಗ-2ಎ | 61% |
| ಪ್ರವರ್ಗ-3ಎ | 17% |
| ಪ್ರವರ್ಗ-3ಬಿ | 21% |
| ಇತರೆ ಹಿಂದುಳಿದ ವರ್ಗ | 01% |
| ಒಟ್ಟು | 100% |

ಈ ಯೋಜನೆಯ ಸಂಬಂಧ ತಗಲುವ ವೆಚ್ಚವನ್ನು "ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ರಾಜ್ಯ ವಲಯದ ಯೋಜನೆ ಲೆಕ್ಕಶೀರ್ಷಿಕೆ 2225-03-277-2-52. ಮತ್ತು ಜಿಲ್ಲಾ ವಲಯದ ಕಾರ್ಯಕ್ರಮ "ಹಿಂದುಳಿದ ವರ್ಗಗಳಿಗೆ ವಿದ್ಯಾರ್ಥಿ ವೇತನ" ಲೆಕ್ಕ ಶೀರ್ಷಿಕೆ 2225-00-103-0-66 ಜಿಲ್ಲಾ ವಲಯ ಯೋಜನೆ ಮತ್ತು ಯೋಜನೇತರದಡಿ ಭರಿಸತಕ್ಕದ್ದು". ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನದ ಮಿತಿಗೊಳಪಟ್ಟು ಒಟ್ಟಾರೆಯಾಗಿ ಈ ಯೋಜನೆಯನ್ನು ಜಾರಿಗೊಳಿಸುವುದು.

ಆದೇಶ ಸಂಖ್ಯೆ: ಸಕಇ 160 ಬಿಎಂಎಸ್ 2012 ದಿನಾಂಕ:29.06.2012ರ ನಿಬಂಧನೆಗಳು ಮುಂದುವರೆಯುತ್ತವೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 729 ವೆಚ್ಚ-3 2014 ದಿನಾಂಕ:-01.12.2014 ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-(ಪ್ರ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಕಲನದಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಪೂರೈಸಲು ಕೋರಲಾಗಿದೆ.

ಗೆ:

1. ಮಹಾಲೇಖಪಾಲರು (ಎ & ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
6. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು
7. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಹಣಾಧಿಕಾರಿಗಳು
8. ಎಲ್ಲಾ ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳಿಗೆ

(4–8: ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ)

9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ-3 & 9 ವಿಧಾನ ಸೌಧ
10. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ
11. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನ ಸೌಧ ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ